**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ**
**ತಿಪಟೂರು**

**ಸಿಸಿ ನಂ. 830/2010**

ದಿನಾಂಕಃ 11-06-2019 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | | | |
|---|---|---|---|
| ಸಾಕ್ಷಿದಾರರ ಹೆಸರು | - | ಬಿ.ಕೆ. ರಮೇಶ್ ಗೌಡ | ಪಿಡಬ್ಲ್ಯೂ-1 |
| ತಂದೆಯ ಹೆಸರು | - | ಕೃಷ್ಣೇಗೌಡ | ಸಿಡಬ್ಲ್ಯೂ-4 |
| ವಯಸ್ಸು | - | 65 ವರ್ಷ | |
| ಉದ್ಯೋಗ | - | ಟೀ ಅಂಗಡಿ | |
| ವಾಸ ಸ್ಥಳ | - | ಗುಬ್ಬಿ | |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ ಃ-**

ನನಗೆ ಈ ಕೇಸಿನ ವಿಚಾರವಾಗಿ ಯಾವುದೇ ವಿಷಯ ಗೊತ್ತಿರುವುದಿಲ್ಲ. ನಾನು ಒಂದು ಪೇಪರಿನಲ್ಲಿ ಸಹಿ ಮಾಡಿರುತ್ತೇನೆ.

ನನಗೆ ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ಇಲ್ಲ. ನಾನು ಪೊಲೀಸರ ಸಮಕ್ಷಮ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸಸಅ ರವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿದಿರುವ ಕಾರಣ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**ಪಾಟೀ ಸವಾಲು - ಮಾನ್ಯ ಸಸಅ ಅವರಿಂದಃ-**

ನಾನು ದಿಃ "10-06-2007.......... ನಮ್ಮಗಳ ಸಮಕ್ಷಮ ಪಂಚನಾಮೆ ಅಮಾನತ್ತು ಪಡಿಸಿಕೊಂಡು ಪಂಚನಾಮೆ ಮಾಡಿರುತ್ತಾರೆ ಎಂದು". ಈ ಮೇಲೆ ಓದಿ ಹೇಳಿದಂತೆ ಪೊಲೀಸರ ಸಮಕ್ಷಮ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ಸದರಿ ಹೇಳಿಕೆ ಭಾಗವನ್ನು ನಿಪಿ-1 ಎಂದು ಗುರುತಿಸಲಾಯಿತು.

**ಪಾಟೀ ಸವಾಲು - ಆರೋಪಿ ಪರ ವಕೀಲರಿಂದಃ** ಇರುವುದಿಲ್ಲ

**<u>ಮರು ವಿಚಾರಣೆಃ- ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯಂತೆ ನನ್ನ ಉಕ್ತಲೇಖನದಲ್ಲಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸರಿ ಇದೆ.

ಸಾಕ್ಷಿಯ ಸಹಿ

ಪ್ರಧಾನ ಸಿವಿಲ್ ನ್ಯಾಯಾಧೀಶರು
ತಿಪಟೂರು.